O S No.28/2024.

**-:ಮಧ್ಯಂತರ ಅರ್ಜಿ ಸಂಖ್ಯೆ 3 ರ ಮೇಲಿನ ಆದೇಶ:-**

ವಾದಿಯು, ಪ್ರತಿವಾದಿಯರ ವಿರುದ್ಧ ಶಾಶ್ವತ ಭಾಗಾಂಶದ ಪರಿಹಾರವನ್ನು ಕೋರಿ ಈ ದಾವೆಯನ್ನು ಸಲ್ಲಿಸಿರುತ್ತಾರೆ. ಜೊತೆಗೆ ಮಧ್ಯಂತರ ಅರ್ಜಿ ಸಂಖ್ಯೆ 3 ನ್ನು ಸಿ.ಪಿ.ಸಿ., ಕ್ರಮಾದೇಶ 39 ನಿಯಮ 1 ಮತ್ತು 2 ರಡಿಯಲ್ಲಿ ಸಲ್ಲಿಸಿ ದಾವಾ ವಿಚಾರಣೆ ಮುಗಿಯುವವರೆಗೆ 1 ನೇ ಪ್ರತಿವಾದಿಯು ದಾವಾ ಪರಿಶಿಷ್ಟದ "ಅ" ಜಂಪ್ರಾ ನಂಬರ 2 ರ ಸ್ಥಳದಲ್ಲಿ ಯಾವುದೇ ಕಟ್ಟಡ, ಇಮಾರತು ವ ಮನೆ ಕಟ್ಟದಂತೆ ತನ್ನ ಪರವಾಗಿ ತಾತ್ಕಾಲಿಕ ನಿರ್ಭಂದಕಾಜ್ಞೆ ಆದೇಶವನ್ನು ಕೋರಿ ಈ ಅರ್ಜಿಯನ್ನು ಸಲ್ಲಿಸಿರುತ್ತಾಳೆ.

ಮಧ್ಯಂತರ ಅರ್ಜಿ ಸಂಖ್ಯೆ 3 ರ ಮೇಲಿನ ವಾದವನ್ನು ಆಲಿಸಲಾಯಿತು. ಮತ್ತು ಸದರಿ ದಾವೆಯಲ್ಲಿನ ದಾಖಲೆಗಳನ್ನು ಮತ್ತು ಪ್ರಮಾಣ ಪತ್ರವನ್ನು ಪರಿಶೀಲಿಸಲಾಯಿತು. ವಾದಿಯು ಹಾಜರುಪಡಿಸಿರುವ ದಾಖಲೆಗಳನ್ನು ಪರಿಶೀಲಿಸಿದಾಗ,

ವಾದಿಯು ಹೂಡಿದ ಈ ದಾವೆಯು ಮೇಲ್ನೋಟಕ್ಕೆ ಸಮ್ಮತವಾದ ದಾವೆಯಾಗಿದೆ ಎಂದು ಕಂಡುಬರುತ್ತದೆ. ಕಛೇರಿಯಲ್ಲಿ ಪರಿಶೀಲಿಸಲಾಯಿತು, ಯಾವುದೇ ಎಚ್ಚರಿಕೆ ಅರ್ಜಿ (ಕೆವಿಯಟ್) ಇರುವುದಿಲ್ಲ. ಆದ್ದರಿಂದ ಈ ಮುಂದಿನಂತೆ ಆದೇಶಿಸುತ್ತೇನೆ.

**ಆ ದೇ ಶ**

ವಾದಿಯು ಸಲ್ಲಿಸಿರುವ ಮಧ್ಯಂತರ ಅರ್ಜಿ ಸಂಖ್ಯೆ 3 ನ್ನು ಭಾಗಶಃ ಪುರಸ್ಕರಿಸಲಾಗಿದೆ.

O S No.28/2024.

1 ನೇ ಪ್ರತಿವಾದಿಯು ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸುವರೆಗೆ ದಾವಾ ಪರಿಶಿಷ್ಟದ "ಅ" ಜಂಪ್ರಾ ನಂಬರ 2 ರ ಸ್ಥಳದಲ್ಲಿ ಯಾವುದೇ ಕಟ್ಟಡ, ಇಮಾರತು ವ ಮನೆ ಕಟ್ಟದಂತೆ ತಾತ್ಕಾಲಿಕವಾಗಿ ನಿರ್ಭಂಧಿಸಲಾಗಿದೆ.

1 ನೇ ಪ್ರತಿವಾದಿಗೆ ಏಕಪಕ್ಷೀಯ ತಾತ್ಕಾಲಿಕ ನಿರ್ಬಂಧಕಾಜ್ಞೆಯ ಪ್ರತಿ ಮತ್ತು ತುರ್ತು ನೋಟಿಸ್ ರವಾನಿಸಲು ಕಛೇರಿಗೆ ನಿರ್ದೇಶಿಸಲಾಗಿದೆ.

ಪ್ರತಿವಾದಿಯರಿಗೆ ದಾವಾ ಸಮನ್ಸ್ ಹೊರಡಿಸಿರಿ.

ವಾದಿಯು ಸಿ.ಪಿ.ಸಿ. ಕ್ರಮಾದೇಶ 39 ನಿಯಮ 3(ಎ) ಮತ್ತು (ಬಿ) ನಿಯಮಗಳನ್ನು ಪರಿಪಾಲಿಸತಕ್ಕದ್ದು.

**ಮುಂದಿನ ವಿಚಾರಣೆ ದಿನಾಂಕಃ 16.03.2024.**

SD/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ಹೊನ್ನಾವರ.